ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ವಿಜಯಪುರದಲ್ಲಿ ನಿರ್ಮಾಣವಾಗುತ್ತಿರುವ ವಿಮಾನ ನಿಲ್ದಾಣ ಕಾಮಗಾರಿಯ ಪ್ರಗತಿಯ ಬಗ್ಗೆ

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

741 (770) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರದಲ್ಲಿ ನಿರ್ಮಾಣ ಮಾಡುತ್ತಿರುವ ವಿಮಾನ ನಿಲ್ದಾಣ ಕಾಮಗಾರಿಯು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾಮಗಾರಿಯನ್ನು ಶೀಘ್ರಗೊಳಿಸಲು ಕೈಗೊಂಡ ಕ್ರಮಗಳೇನು;

(ಆ) ಸದರಿ ಕಾಮಗಾರಿಯ ಅಂದಾಜು ಪಟ್ಟಿಯನ್ನು ಅಂತಿಮಗೊಳಿಸಲಾಗಿದೆಯೇ; ಅಂತಿಮಗೊಳಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅಂತಿಮಗೊಳಿಸಲಾಗುವುದು; (ವಿವರ ನೀಡುವುದು)

(ಇ) ಈ ಕಾಮಗಾರಿಗೆ ಸಂಬಂಧಪಟ್ಟಂತೆ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು? (ವಿವರ ನೀಡುವುದು)